[ಪರಿಷ್ಕೃತ]

# ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ: ಸಿ3(7)/ಪ್ರಾ ಶಿ ವರ್ಗ 08/2017-18 ದಿನಾಂಕ: 19.09.2019

### ಜ್ಞಾಪನ

ವಿಷಯ 2018-19ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕ ವೃಂದದ ಅಂತರ ಘಟಕ (ವಿಭಾಗದ ಒಳಗೆ ಮತ್ತು ವಿಭಾಗದ ಹೊರಗಿನ ಸಮಗ್ರ ಪಟ್ಟಿಯಂತೆ) ವರ್ಗಾವಣಾ ಕೌನ್ಸಿಲಿಂಗ್‌ಗೆ ಕ್ರಮ ಸಂಖ್ಯೆವಾರು ಪರಿಷ್ಕೃತ ವೇಳಾಪಟ್ಟಿ ನಿಗದಿಪಡಿಸಿರುವ ಬಗ್ಗೆ.

ಉಲ್ಲೇಖ :1. ಈ ಕಛೇರಿ ಜ್ಞಾಪನ ಸಮ ಸಂಖ್ಯೆ, ವಿವಿಧ ದಿನಾಂಕಗಳು ಮತ್ತು ದಿನಾಂಕ:17.09.2019

***

ವಿಷಯದನ್ವಯ ದಿನಾಂಕ: 16.09.2019 ರಿಂದ ನಡೆಯುತ್ತಿರುವ ಪ್ರಾಥಮಿಕ ಶಾಲಾ ಶಿಕ್ಷಕರ ಘಟಕದ ಹೊರಗಿನ ವರ್ಗಾವಣೆಗಳನ್ನು ಉಲ್ಲೇಖಿತ ದಿನಾಂಕ:17.09.2019ರ ಜ್ಞಾಪನದಲ್ಲಿ ಕ್ರಮಸಂಖ್ಯೆವಾರು ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ನಿಗದಿಪಡಿಸಲಾಗಿತ್ತು.

ಆದರೆ ತಾಂತ್ರಿಕ ಅಡಚಣೆಯಿಂದ ನಿಗಧಿತ ವೇಳಾಪಟ್ಟಿಯಂತೆ ಕೌನ್ಸಿಲಿಂಗ್ ಕ್ರಮಗಳನ್ನು ಕೈಗೊಳ್ಳಲು ಸಾದ್ಯವಾಗುತ್ತಿಲ್ಲವಾದ್ದರಿಂದ ಈ ಕೆಳಗಿನ ಪುನರ್ ಪರಿಷ್ಕೃತ ವೇಳಾಪಟ್ಟಿಯಂತೆ ಶಿಕ್ಷಕರು ಕೌನ್ಸಿಲಿಂಗ್‌ಗೆ ಹಾಜರಾಗಲು ತಿಳಿಸಿದೆ. ಸಂಬಂಧಿಸಿದ ಪ್ರಾಧಿಕಾರಿಗಳು ಈ ಕುರಿತು ಅಗತ್ಯ ಕ್ರಮವಹಿಸಲು ತಿಳಿಸಿದೆ.

ಅನಿವಾರ್ಯ ಕಾರಣಗಳಿಂದ ಕ್ರಮಸಂಖ್ಯೆವಾರು ಕೌನ್ಸಿಲಿಂಗ್ ಪ್ರಕ್ರಿಯೆ ಆಯಾ ದಿನಾಂಕಗಳಂದು ಪೂರ್ಣಗೊಳ್ಳದಿದ್ದಲ್ಲಿ, ಬದಲಾದ ದಿನಾಂಕಗಳನ್ನು ತಕ್ಷಣ ಪ್ರಕಟಿಸಲಾಗುವುದು.

| ಕ್ರ. ಸಂ. | ದಿನಾಂಕ | ಸಮಯ | ಅಂತಿಮ ಆದ್ಯತಾ ಪಟ್ಟಿಯಲ್ಲಿರುವ ಕ್ರಮ ಸಂಖ್ಯೆಗಳಂತೆ |
|---|---|---|---|
| 3 | 19.09.2019 | ಬೆಳಿಗ್ಗೆ 9 ರಿಂದ | 751 ರಿಂದ 1000ರ ವರೆಗಿನ ಪ್ರಾಥಮಿಕ ಶಾಲಾ ಸಹ ಶಿಕ್ಷಕರು (ನಾಲ್ಕು ವಿಭಾಗಗಳು ಸೇರಿ) |
| 4 | 20.09.2019 | ಬೆಳಿಗ್ಗೆ 9 ರಿಂದ | 1001 ರಿಂದ 1200ರ ವರೆಗಿನ ಪ್ರಾಥಮಿಕ ಶಾಲಾ ಸಹ ಶಿಕ್ಷಕರು (ನಾಲ್ಕು ವಿಭಾಗಗಳು ಸೇರಿ) |
| 5 | 21.09.2019 | ಬೆಳಿಗ್ಗೆ 9 ರಿಂದ | 1201 ರಿಂದ 1400ರ ವರೆಗಿನ ಪ್ರಾಥಮಿಕ ಶಾಲಾ ಸಹ ಶಿಕ್ಷಕರು (ನಾಲ್ಕು ವಿಭಾಗಗಳು ಸೇರಿ) |
| ಕ್ರಮ ಸಂಖ್ಯೆ 1401ರಿಂದ 11340ರಲ್ಲಿನ ಶಿಕ್ಷಕರುಗಳಿಗೆ ಕೌನ್ಸಿಲಿಂಗ್ ದಿನಾಂಕಗಳನ್ನು ಹಾಗು ಅಂತರ ಘಟಕ ಪರಸ್ಪರ ವರ್ಗಾವಣಾ ದಿನಾಂಕಗಳನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು. | | | |

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಗೆ,

ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು.

ಪ್ರತಿ

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗ/ಧಾರವಾಡ.
2. ರಾಜ್ಯದ ಎಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ.
3. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ವೇಳಾಪಟ್ಟಿಯಂತೆ ಅಗತ್ಯ ಕ್ರಮ ಕೈಗೊಳ್ಳಲು ಹಾಗೂ ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸಲು